**All India Radio: Bangalore**
**National Bulletin In Kannada**
**26.07.2025 1.10 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**26.07.2025 1.10 a.m.**

**<><><><>**

ಮುಖ್ಯಾಂಶಗಳು

1. ತಮಿಳುನಾಡಿಗೆ ಇಂದಿನಿಂದ ಪ್ರಧಾನಿ ನರೇಂದ್ರ ಮೋದಿ ಭೇಟಿ; ೪ ಸಾವಿರದ ೮೦೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಯೋಜನೆಗಳಿಗೆ ಚಾಲನೆ
2. ಕಾರ್ಗಿಲ್ ವಿಜಯ್ ದಿವಸ್; ರಾಷ್ಟ್ರಪತಿ, ಪ್ರಧಾನಿ ಸೇರಿ ಗಣ್ಯರಿಂದ ಹುತಾತ್ಮ ಯೋಧರಿಗೆ ಗೌರವ ನಮನ
3. ದೇಶಾದ್ಯಂತ ಈವರೆಗೆ ೧೦ ಕೋಟಿ ೧೮ ಲಕ್ಷಕ್ಕೂ ಅಧಿಕ ಮಹಿಳೆಯರಿಗೆ ಗರ್ಭಕಂಠ ಕ್ಯಾನ್ಸರ್ ತಪಾಸಣೆ
4. ಚೀನಾ ಮುಕ್ತ ಬ್ಯಾಡ್ಮಿಂಟನ್; ಪುರುಷರ ಡಬಲ್ಸ್ ಸೆಮಿಫೈನಲ್‌ನಲ್ಲಿ ಇಂದು ಭಾರತದ ಸಾತ್ವಿಕ್ - ಚಿರಾಗ್ ಜೋಡಿ ಸ್ಪರ್ಧೆ
5. ಆಂಡರ್ಸನ್-ತೆಂಡೂಲ್ಕರ್ ಟ್ರೋಫಿ ನಾಲ್ಕನೇ ಟೆಸ್ಟ್ ಕ್ರಿಕೆಟ್; ೪ನೇ ದಿನ ಮೊದಲ ಇನ್ನಿಂಗ್ಸ್ ಮುಂದುವರಿಸಲಿರುವ ಇಂಗ್ಲೆಂಡ್

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದಿನಿಂದ ಎರಡು ದಿನಗಳ ತಮಿಳುನಾಡು ಪ್ರವಾಸ ಕೈಗೊಳ್ಳಲಿದ್ದಾರೆ. ಬ್ರಿಟನ್ ಮತ್ತು ಮಾಲ್ಡೀವ್ಸ್ ರಾಷ್ಟ್ರಗಳ ಪ್ರವಾಸ ಪೂರ್ಣಗೊಳಿಸಿದ ನಂತರ ಪ್ರಧಾನಿ, ನೇರವಾಗಿ ಟುಟಿಕೋರಿನ್‌ಗೆ ಪ್ರಯಾಣ ಬೆಳಸಲಿದ್ದಾರೆ. ಇಂದು ರಾತ್ರಿ ಟುಟಿಕೋರಿನ್‌ನಲ್ಲಿ ಪ್ರಧಾನಿಯವರು ೪ ಸಾವಿರದ ೮೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ರಾಷ್ಟ್ರಕ್ಕೆ ಸಮರ್ಪಿಸಿ, ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಯೋಜನೆಗಳು, ಪ್ರಾದೇಶಿಕ ಸಂಪರ್ಕವನ್ನು ಗಮನಾರ್ಹವಾಗಿ ವೃದ್ಧಿಸಿ, ಶುದ್ಧ ಇಂಧನ ಮೂಲಸೌಕರ್ಯವನ್ನು ಬಲಪಡಿಸುತ್ತವೆ. ಇವುಗಳಲ್ಲಿ ಟುಟಿಕೋರಿನ್ ವಿಮಾನ ನಿಲ್ದಾಣದಲ್ಲಿ ಹೊಸ ಟರ್ಮಿನಲ್ ಕಟ್ಟಡ, ಸೇಥಿಯಾಥೊಪ್ಪು-ಚೋಳಪುರಂನ ಚತುಷ್ಪಥ,

ತೂತುಕುಡಿ ಬಂದರು ರಸ್ತೆಯ ಷಟ್ಪಥ, ೯೦ ಕಿ.ಮೀ. ಮಧುರೈ-ಬೋಡಿನಾಯಕನೂರ್ ರೈಲು ಮಾರ್ಗದ ವಿದ್ಯುದೀಕರಣ, ೨೧ ಕಿ.ಮೀ. ನಾಗರಕೋಯಿಲ್ ಪಟ್ಟಣ-ಕನ್ಯಾಕುಮಾರಿ ವಿಭಾಗದ ರೈಲು ಮಾರ್ಗದ ದ್ವಿಗುಣಗೊಳಿಸುವಿಕೆ ಸೇರಿವೆ. ಅಲ್ಲದೇ, ಪ್ರಮುಖ ವಿದ್ಯುತ್ ಪ್ರಸರಣ ಯೋಜನೆಗೆ ಪ್ರಧಾನಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ನಾಳೆ, ತಿರುಚಿರಾಪಳ್ಳಿಯ ಗಂಗೈಕೊಂಡ ಚೋಳಪುರಂ ದೇವಸ್ಥಾನಕ್ಕೆ ಭೇಟಿ ನೀಡಲಿರುವ ಅವರು, ಚೋಳ ಚಕ್ರವರ್ತಿ ರಾಜೇಂದ್ರ ಚೋಳ ಅವರ ಜನ್ಮ ವಾರ್ಷಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ.

<><><>

ಮಾಲ್ಡೀವ್ಸ್ ರಾಜಧಾನಿ ಮಾಲೆಯಲ್ಲಿ ಇಂದು ನಡೆಯಲಿರುವ ೬೦ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಗೌರವ ಅತಿಥಿಯಾಗಿ ಭಾಗವಹಿಸಲಿದ್ದಾರೆ.

ಅಧ್ಯಕ್ಷ ಮೊಹಮ್ಮದ್ ಮುಯಿಝು ಅವರ ಆಹ್ವಾನದ ಮೇರೆಗೆ ಪ್ರಧಾನಿ, ಮಾಲ್ಡೀವ್ಸ್‌ಗೆ ಅಧಿಕೃತ ಭೇಟಿ ನೀಡಿದ್ದಾರೆ. ಇಂದು ಅವರು, ಮಾಲ್ಡೀವ್ಸ್ ಉಪಾಧ್ಯಕ್ಷ ಹುಸೇನ್ ಮೊಹಮ್ಮದ್ ಲತೀಫ್ ಮತ್ತು ಮಾಲ್ಡೀವ್ಸ್ ಸಂಸತ್ತಿನ ಸ್ಪೀಕರ್ ಅಬ್ದುಲ್ ರಹೀಂ ಅಬ್ದುಲ್ಲಾ ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ.

<><><>

ಮಾಲ್ಡೀವ್ಸ್ ಸ್ವಾತಂತ್ರ್ಯೋತ್ಸವದ ವಜ್ರ ಮಹೋತ್ಸವದ ಅಂಗವಾಗಿ ಮಾಲ್ಡೀವ್ಸ್ ಸರ್ಕಾರ ಹಾಗೂ ಜನತೆಗೆ ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಶುಭ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಭಾರತ - ಮಾಲ್ಡೀವ್ಸ್ ನಡುವಿನ ರಾಜತಾಂತ್ರಿಕ ಸಂಬಂಧಗಳ ೬೦ ವರ್ಷ ಪೂರೈಸುತ್ತಿರುವ ಸಂದರ್ಭದಲ್ಲಿ ಹಿಂದೂ ಮಹಾಸಾಗರ ಪ್ರದೇಶದ ಶಾಂತಿ, ಸಮೃದ್ಧಿ ಮತ್ತು ಸ್ಥಿರತೆಗೆ ಉಭಯ ರಾಷ್ಟ್ರಗಳ ನಡುವಿನ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಬದ್ಧತೆಯನ್ನು ಸಚಿವ ಜೈಶಂಕರ್ ಪುನರುಚ್ಚರಿಸಿದರು.

<><><>

೧೯೯೯ರ ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ಭಾರತೀಯ ಸೈನಿಕರ ಶೌರ್ಯವನ್ನು ಗೌರವಿಸಲು ಇಂದು ದೇಶಾದ್ಯಂತ ಕಾರ್ಗಿಲ್ ವಿಜಯ್ ದಿವಸ್ ಆಚರಿಸಲಾಗುತ್ತಿದೆ. ಯುದ್ಧದಲ್ಲಿ, ಪಾಕಿಸ್ತಾನದ ವಿರುದ್ಧ ಭಾರತ ಸಾಧಿಸಿದ ವಿಜಯ ಮತ್ತು ಆಪರೇಷನ್ ವಿಜಯ್‌ನ ಯಶಸ್ಸಿನ ೨೬ನೇ ವಾರ್ಷಿಕೋತ್ಸವವನ್ನು ಇಂದು ಆಚರಿಸಲಾಗುತ್ತಿದೆ. ಸೇನಾ ಕಾರ್ಯಾಚರಣೆ

ಸಮಯದಲ್ಲಿ, ಭಾರತೀಯ ಸಶಸ್ತ್ರ ಪಡೆಗಳು ತೀವ್ರ ಹವಾಮಾನ ಪರಿಸ್ಥಿತಿ ನಡುವೆ ಜಮ್ಮು ಮತ್ತು ಕಾಶ್ಮೀರದ ಕಠಿಣ ಭೂ ಪ್ರದೇಶ ಹೊಂದಿರುವ ಕಾರ್ಗಿಲ್ ಜಿಲ್ಲೆಯಲ್ಲಿ ಪಾಕಿಸ್ತಾನಿ ಸೈನಿಕರು ಮತ್ತು ಉಗ್ರಗಾಮಿಗಳು ನುಸುಳಿದ್ದ ಪ್ರದೇಶಗಳನ್ನು ಮರಳಿ ಪಡೆದುಕೊಂಡವು. ಕಾರ್ಗಿಲ್ ವಿಜಯ್ ದಿನದ ಅಂಗವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಅವರು, ದೇಶಕ್ಕಾಗಿ ತಮ್ಮ ಪ್ರಾಣವನ್ನೇ ತ್ಯಾಗಗೈದ ವೀರ ಯೋಧರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್, ೧೯೯೯ರ ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ವೀರ ಯೋಧರ ಗೌರವಾರ್ಥ ನವದೆಹಲಿಯಲ್ಲಿರುವ ರಾಷ್ಟ್ರೀಯ ಯುದ್ಧ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿದರು. ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್, ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚವ್ಹಾಣ್, ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ವಾಯುಪಡೆ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎ.ಪಿ. ಸಿಂಗ್ ಮತ್ತು ನೌಕಾಪಡೆ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ, ಯೋಧರಿಗೆ ಗೌರವ ನಮನ ಸಲ್ಲಿಸಿದರು.

<><><><>

೨೬ನೇ ಕಾರ್ಗಿಲ್ ವಿಜಯ್ ದಿವಸದ ಅಂಗವಾಗಿ ಲಡಾಖ್‌ನ ದ್ರಾಸ್‌ನಲ್ಲಿರುವ ನಡೆದ ಕಾರ್ಗಿಲ್ ಯುದ್ಧ ಸ್ಮಾರಕದಲ್ಲಿ ವೀರ ಯೋಧರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಸಮಾರಂಭದಲ್ಲಿ ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ, ಕೇಂದ್ರ ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್, ಲಡಾಖ್ ಲೆಫ್ಟಿನೆಂಟ್ ಗವರ್ನರ್ ಕವೀಂದರ್ ಗುಪ್ತಾ, ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಸೇರಿದಂತೆ ಹಿರಿಯ ಸೇನಾಧಿಕಾರಿಗಳು ಉಪಸ್ಥಿತರಿದ್ದರು. ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಜನರಲ್ ಉಪೇಂದ್ರ ದ್ವಿವೇದಿ, ಇದು ಯೋಧರ ಕುಟುಂಬಗಳಿಗೆ ಗೌರವ ಸೂಚಿಸುವ ದಿನವಾಗಿದೆ. ಭಾರತದ ಸಾರ್ವಭೌಮತೆಗೆ ಎದುರಾಗುವ ಯಾವುದೇ ಸವಾಲನ್ನು ಧೈರ್ಯವಾಗಿ ಎದುರಿಸಿ, ಸೂಕ್ತ ಪ್ರತ್ಯುತ್ತರ ನೀಡಲು ಭಾರತೀಯ ಸೇನೆ ಸದೃಢವಾಗಿದೆ ಎಂದರು. ಇದೇ ವೇಳೆ ಅವರು, ಸಶಸ್ತ್ರ ಘಟಕಗಳು, ವಿಶೇಷ ಪಡೆಗಳು, ಸರಕು ಮತ್ತು ಯುದ್ಧ ಬೆಂಬಲ ಘಟಕಗಳನ್ನೊಳಗೊಂಡ ನೂತನ ಬ್ರಿಗೇಡ್‌ಗೆ ಅನುಮೋದನೆ ದೊರೆತಿರುವ ಕುರಿತು ಘೋಷಿಸಿದರು.

<><><><>

ಆಯುಷ್ಮಾನ್ ಆರೋಗ್ಯ ಮಂದಿರ ಮತ್ತು ರಾಷ್ಟ್ರೀಯ ಆರೋಗ್ಯ ಯೋಜನೆ ಅಡಿಯಲ್ಲಿ ದೇಶಾದ್ಯಂತ ೧೦ ಕೋಟಿ ೧೮ ಲಕ್ಷಕ್ಕೂ ಅಧಿಕ ಮಹಿಳೆಯರಿಗೆ ಗರ್ಭಕಂಠ ಕ್ಯಾನ್ಸರ್ ತಪಾಸಣೆ ನಡೆಸಲಾಗಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ತಿಳಿಸಿದೆ. ಈ ಸಾಧನೆ ಜನಸಂಖ್ಯೆ ಆಧಾರಿತ ತಪಾಸಣೆ, ತಡೆಗಟ್ಟುವಿಕೆ ಮತ್ತು ಸಾಂಕ್ರಾಮಿಕವಲ್ಲದ ರೋಗಗಳ ನಿರ್ವಹಣೆಗೆ ಸರ್ಕಾರ ಕೈಗೊಂಡಿರುವ ಉಪಕ್ರಮದ ಭಾಗವಾಗಿದೆ. ಈ ಉಪಕ್ರಮ ೩೦ ರಿಂದ ೬೫ ವಯೋಮಾನದ ಮಹಿಳೆಯರನ್ನು ತಲುಪುವ ಗುರಿಯೊಂದಿಗೆ ಪ್ರಮುಖವಾಗಿ ಪ್ರಾಥಮಿಕ ಚಿಕಿತ್ಸಾ ಕೇಂದ್ರಗಳಲ್ಲಿ ಮತ್ತು ಉಪ ಆರೋಗ್ಯ ಕೇಂದ್ರಗಳಲ್ಲಿ ತಪಾಸಣೆ ನಡೆಸಲು ಉದ್ದೇಶಿಸಲಾಗಿದೆ. ಗಂಭೀರ ಪ್ರಕರಣಗಳನ್ನು ಉನ್ನತ ಕೇಂದ್ರಗಳಿಗೆ ಕಳುಹಿಸಲಾಗಿದೆ. ಈ ಸಾಧನೆ ಆಯುಷ್ಮಾನ್ ಆರೋಗ್ಯ ಮಂದಿರಗಳ ಮೂಲಕ ಸಮಗ್ರ ಆರೋಗ್ಯ ಸೇವೆಗಳ ವಿತರಣೆ ಕುರಿತು ಸರ್ಕಾರ ಹೊಂದಿರುವ ಬದ್ಧತೆಯ ಪ್ರತಿಬಿಂಬವಾಗಿದೆ ಎಂದು ಸಚಿವಾಲಯ ತಿಳಿಸಿದೆ.

<><><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೪ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಕೇಳಬಹುದಾಗಿದೆ.

<><><>

ಬಿಹಾರದಲ್ಲಿ ಪತ್ರಕರ್ತರಿಗೆ ಮಾಸಿಕ ೧೫ ಸಾವಿರ ರೂಪಾಯಿ ಪಿಂಚಣಿಯನ್ನು ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಘೋಷಿಸಿದ್ದಾರೆ. ಈ ಕುರಿತಂತೆ ಇಂದು ಬೆಳಗ್ಗೆ ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಬಿಹಾರ ಪತ್ರಕರ್ತ ಸಮ್ಮಾನ್ ಪಿಂಚಣಿ ಯೋಜನೆ ಅಡಿಯಲ್ಲಿ ಎಲ್ಲಾ ಅರ್ಹ ಪತ್ರಕರ್ತರು ಪ್ರತಿ ತಿಂಗಳು ಈ ಹಿಂದಿನ ೬ ಸಾವಿರ ರೂಪಾಯಿ ಬದಲಿಗೆ ೧೫ ಸಾವಿರ ಪಿಂಚಣಿ ಪಡೆಯಲಿದ್ದಾರೆ ಎಂದು ತಿಳಿಸಿದ್ದಾರೆ.

<><><>

ಚೀನಾದ ಚಾಂಗ್‌ಝೌನಲ್ಲಿ ನಡೆಯುತ್ತಿರುವ ಚೀನಾ ಮುಕ್ತ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಪುರುಷರ ಡಬಲ್ಸ್ ವಿಭಾಗದ ಸೆಮಿಫೈನಲ್ ಹಂತಕ್ಕೇರಿದೆ. ಇಂದು ನಡೆಯಲಿರುವ ಸೆಮಿಫೈನಲ್‌ನಲ್ಲಿ ಭಾರತದ ಜೋಡಿ ವಿಶ್ವ ಎರಡನೇ ಶ್ರೇಯಾಂಕಿತ ಮಲೇಷ್ಯಾದ ಆರೋನ್ ಚಿಯಾ ಮತ್ತು ಸೋವುಯಿ ಇಕ್ ಜೋಡಿಯನ್ನು ಎದುರಿಸಲಿದೆ. ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಜೋಡಿ ವಿಶ್ವ ಮೂರನೇ ಶ್ರೇಯಾಂಕಿತ ಮಲೇಷ್ಯಾದ ಆಂಗ್ ಯುವ್ ಸಿನ್ ಮತ್ತು ತಿಯೊ ಎಇ ಜೋಡಿಯನ್ನು ೨೧-೧೮, ೨೧-೧೪ ನೇರ ಸೆಟ್‌ಗಳಿಂದ ಮಣಿಸಿತು.

<><><><>

ಮ್ಯಾಂಚೆಸ್ಟರ್‌ನ ಓಲ್ಡ್ ಟ್ರಾಫರ್ಡ್‌ನಲ್ಲಿ  ಭಾರತ- ಇಂಗ್ಲೆಂಡ್ ನಡುವೆ ನಡೆಯುತ್ತಿರುವ ಆಂಡರ್ಸನ್-ತೆಂಡೂಲ್ಕರ್ ಟ್ರೋಫಿಯ, ನಾಲ್ಕನೇ ಟೆಸ್ಟ್ ಕ್ರಿಕೆಟ್‌ನ, ೪ನೇ ದಿನವಾದ ಇಂದು, ೬ ವಿಕೆಟ್‌ಗೆ ೫೪೪ ರನ್‌ಗಳಿಸಿರುವ ಇಂಗ್ಲೆಂಡ್ ತನ್ನ ಮೊದಲ ಇನ್ನಿಂಗ್ಸ್ ಅನ್ನು ಮುಂದುವರಿಸಲಿದೆ. ನಿನ್ನೆ ೩ನೇ ದಿನದಾಟದ ಅಂತ್ಯಕ್ಕೆ ಆತಿಥೇಯರು ೧೮೬ ರನ್‌ಗಳ ಮುನ್ನಡೆಯಲ್ಲಿದ್ದರು. ಬೆನ್ ಸ್ಟೋಕ್ಸ್ ಮತ್ತು ಲಿಯಾಮ್ ಡಾಸನ್ ಕ್ರೀಸ್‌ನಲ್ಲಿದ್ದರು. ಇಂಗ್ಲೆಂಡ್‌ನ ಜೋ ರೂಟ್ ೨೪೮ ಎಸೆತಗಳಲ್ಲಿ ೧೫೦ ರನ್ ಗಳಿಸಿ, ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ ಎರಡನೇ ಅತಿ ಹೆಚ್ಚು ರನ್ ಗಳಿಸಿದ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಇದರೊಂದಿಗೆ ಅವರು, ಆಸ್ಟ್ರೇಲಿಯಾದ ಶ್ರೇಷ್ಠ ಆಟಗಾರ  ರಿಕಿ ಪಾಂಟಿಂಗ್ ಅವರ ೧೩ ಸಾವಿರದ ೩೭೮ ರನ್‌ಗಳ ದಾಖಲೆಯನ್ನು ಹಿಂದಿಕ್ಕಿದ್ದಾರೆ. ಅಗ್ರಸ್ಥಾನದಲ್ಲಿರುವ ಭಾರತದ ಸಚಿನ್ ತೆಂಡೂಲ್ಕರ್ ನಂತರದ ಸ್ಥಾನದಲ್ಲಿರುವ ಜೋರೂಟ್, ೧೫ ಸಾವಿರದ ೯೨೧ ರನ್ ಗಳಿಸಿದ್ದಾರೆ. ಇದಕ್ಕೂ ಮುನ್ನ ಭಾರತ, ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು, ೩೫೮ ರನ್‌ಗಳಿಸಿದೆ. ಪ್ರಸ್ತುತ, ಪ್ರವಾಸಿ ತಂಡ ಐದು ಪಂದ್ಯಗಳ ಸರಣಿಯಲ್ಲಿ ೧-೨ರ ಹಿನ್ನಡೆಯಲ್ಲಿದೆ.

<><><><>

ಭಾರತದ ಸುಮಿತ್ ನಗಾಲ್ ಟ್ಯಾಂಪಿಯರ್ ಎಟಿಪಿ ಚಾಲೆಂಜರ್ ಟೆನಿಸ್ ಟೂರ್ನಿಯಲ್ಲಿ ಸೆಮಿಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ. ನಿನ್ನೆ ನಡೆದ ಕ್ವಾರ್ಟರ್ ಫೈನಲ್‌ನಲ್ಲಿ ಅವರು, ಅರ್ಜೆಂಟೀನಾದ ನಿಕೋಲಸ್ ಕಿಕ್ಕರ್ ಅವರನ್ನು ೬-೪, ೬-೩ ಅಂತರಗಳಲ್ಲಿ ಮಣಿಸಿದರು. ಇಂದು ಸಂಜೆ ೪.೪೦ಕ್ಕೆ

ನಡೆಯಲಿರುವ ಸೆಮಿಫೈನಲ್‌ನಲ್ಲಿ ಸುಮಿತ್, ಫ್ರಾನ್ಸ್‌ನ ಗುಯೆಮಾರ್ಡ್ ವಾಯಂಬರ್ಗ್ ವಿರುದ್ಧ ಸೆಣಸಾಟ ನಡೆಸಲಿದ್ದಾರೆ.

<><><><>

ಜಾರ್ಜಿಯಾದ ಬಟುಮಿಯಲ್ಲಿ ನಡೆಯುತ್ತಿರುವ ಫಿಡೆ ಮಹಿಳಾ ಚೆಸ್ ವಿಶ್ವಕಪ್‌ನ ಅಂತಿಮ ಸ್ಪರ್ಧೆ ಇಬ್ಬರು ಭಾರತೀಯರ ನಡುವಿನ ಸೆಣಸಾಟಕ್ಕೆ ಸಾಕ್ಷಿಯಾಗಲಿದೆ. ಸೆಮಿಫೈನಲ್ ಪಂದ್ಯಗಳಲ್ಲಿ ಜಯ ಸಾಧಿಸಿದ ನಂತರ, ಭಾರತದ ದಿವ್ಯಾ ದೇಶ್ಮುಖ್ ಮತ್ತು ಕೊನೇರು ಹಂಪಿ ಇಂದು ಆರಂಭವಾಗಲಿರುವ ಫೈನಲ್‌ನಲ್ಲಿ ಮುಖಾಮುಖಿಯಾಗಲಿದ್ದಾರೆ. ಇಂದು ಭಾರತೀಯ ಕಾಲಮಾನ ಸಂಜೆ ೪.೩೦ಕ್ಕೆ ಮೊದಲನೇ ಸುತ್ತಿನ ಪಂದ್ಯ ನಡೆಯಲಿದ್ದು, ನಾಳೆ ಎರಡನೇ ಸುತ್ತಿನ ಪಂದ್ಯ ಜರುಗಲಿದೆ. ಉಭಯ ಆಟಗಾರರು ಸಮಬಲ ಸಾಧಿಸಿದಲ್ಲಿ ನಾಡಿದ್ದು ಟೈ ಬ್ರೇಕರ್ ಪಂದ್ಯ ನಡೆಯಲಿದೆ. ಭಾರತೀಯರ ನಡುವಿನ ಈ ಫೈನಲ್ ಪಂದ್ಯ ಭಾರತದ ಚೆಸ್ ಇತಿಹಾಸದಲ್ಲಿ ನೂತನ ಮೈಲಿಗಲ್ಲಾಗಿದ್ದು, ಜಾಗತಿಕ ಮಟ್ಟದಲ್ಲಿ ಭಾರತದ ಚೆಸ್ ಪ್ರಾಬಲ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>